# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ದಿನಾಂಕ: 23/08/2021 ರಂದು ಬೆಳಿಗ್ಗೆ 11.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಿಂಗಸಂದ್ರ ವಾರ್ಡ್ ಸಂಖ್ಯೆ-191 ರ ವಾರ್ಡ್ ಸಮಿತಿ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದಂತಹ ಶ್ರೀ.ಪ್ರಸನ್ನಕುಮಾರ.ವಿ. ಉಪ-ಆಯುಕ್ತರು ರವರ ಸಮ್ಮುಖದಲ್ಲಿ ಅವರ ಅನುಮತಿಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ನಡೆಸಲಾಯಿತು.

ಪ್ರಾರಂಭದಲ್ಲಿ ವಾರ್ಡ್ ಸಮಿತಿ ಕಾರ್ಯದರ್ಶಿ ಶ್ರೀ.ಎ.ಪಿ.ಶಿವಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-191, ಸಿಂಗಸಂದ್ರ ರವರು ಸಭೆಗೆ ಹಾಜರಾಗಿರುವ ಅಧ್ಯಕ್ಷರು, ಸದಸ್ಯರು, ಅಧಿಕಾರಿಗಳು, ಹಾಗೂ ಇತರರನ್ನು ಸ್ವಾಗತಿಸಿ ಕಾರ್ಯಕ್ರಮ ಪ್ರಾರಂಭಿಸಿದರು.

ಹಿಂದಿನ ಸಭೆಯ ನಡಾವಳಿಗಳನ್ನು ಸಭೆಯಲ್ಲಿ ಮಂಡಿಸಿ ಸಂಬಂಧಪಟ್ಟ ಅಧಿಕಾರಿಗಳಿಂದ ಹಿಂದಿನ ಸಭೆಯ ನಡಾವಳಿಗಳ ಪಾಲನೆಯ ಬಗ್ಗೆ ಮಾಹಿತಿ ಪಡೆಯಲಾಯಿತು. ಅದರಂತೆ ಇಂದಿನ ಸಭೆಯಲ್ಲಿ ಚರ್ಚಿಸಬೇಕಾದ ವಿಷಯಗಳು ಈ ಕೆಳಕಂಡಂತಿರುತ್ತದೆ.

1.ಕೋವಿಡ್-19 ಮಹಾಮಾರಿ ಸಾಂಕ್ರಮಿಕರೋಗ ಹರಡದಂತೆ ಮುಂಜಾಗ್ರತಕ್ರಮ ಕೈಗೊಳ್ಳಲು ತೆಗೆದುಕೊಳ್ಳಬಹುದಾದ ಕ್ರಮಗಳು.

2.ವಿಪತ್ತು ನಿರ್ವಹಣಾ ಸಮಿತಿ(ಡಿಸಾಸ್ಟರ್ ಮ್ಯಾನೇಜಮೆಂಟ್‌ಕಮಿಟಿ) ನಿರ್ವಹಿಸಬೇಕಾದ ಕ್ರಮಗಳ ಬಗ್ಗೆ.

3.ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವುದು.

4.ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸುವುದು,

5.ಮಳೆಯಿಂದ ಸಂಭವಿಸಿದ/ ಸಂಭವಿಸಬಹುದಾದ ಅನಾಹುತಗಳ ಬಗ್ಗೆ ಕ್ರಮ ಕೈಗೊಳ್ಳವ ಬಗ್ಗೆ ಚರ್ಚಿಸುವುದು,

6.BWSSB Project ಮತ್ತು ನಿರ್ವಹಣೆಯ ಬಗ್ಗೆ ಚರ್ಚಿಸುವುದು,

7.ಕುಡಿಯುವನೀರು ಸರಬರಾಜು ಬಗ್ಗೆಚರ್ಚಿಸುವುದು,

8.ಗೇಲ್‌ಗ್ಯಾಸ್ ಪೈಪ್ ಲೈನ್ ನಿರ್ವಹಣೆಯ ಬಗ್ಗೆ ಚರ್ಚಿಸುವುದು,

ಸಭೆಯ ನಡಾವಳಿಗಳು

1. ವಾರ್ಡ್ ನಂ 191 ಸಿಂಗಸಂದ್ರ ವ್ಯಾಪ್ತಿಯಲ್ಲಿ ಬರುವ ಕೂಡ್ಲು ಗ್ರಾಮದ ವಾಸ್ತು ಲೇಔಟ್ ಮತ್ತು ಅಂಬೇಡ್ಕರ್ ಕಾಲೋನಿ ಮತ್ತು ಎ.ಇ.ಸಿಎಸ್ ಲೇಔಟ್ ನಲ್ಲಿ ಸರಿಯಾದ ರಸ್ತೆ ಇರುವುದಿಲ್ಲ, ಮತ್ತು ಮ್ಯಾನ್ ಹೋಲ್ ನಲ್ಲಿ ಸಿಲ್ಟ್ ತುಂಬಿ ನೀರು ಸರಾಗವಾಗಿ ಹೋಗುವುದಿಲ್ಲ, ಅದನ್ನು ಸರಿಪಡಿಸಬೇಕೆಂದು ಸ್ಥಳಿಯರು ದೂರನ್ನು ನೀಡಿದರು. ಬಿ.ಡಬ್ಲ್ಯುಎಸ್.ಎಸ್.ಬಿ ಯವರು ಒಳಚರಂಡಿಗೆ ಸಂಬಂಧಿಸಿದ ಸಮಸ್ಯೆಗಳನ್ನು ತುರ್ತಾಗಿ ಪರಿಹರಿಸಬೇಕೆಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯುಎಸ್.ಎಸ್.ಬಿ ಮತ್ತು ಎಲ್ & ಟಿ ಸಹಾಯಕ ಅಭಿಯಂತರರಿಗೆ ಸೂಚಿಸಿದರು.

2. ವಾರ್ಡ್ ವ್ಯಾಪ್ತಿಯಲ್ಲಿ ಬೇರೆ ಪ್ರದೇಶಗಳಲ್ಲಿ ಕಾವೇರಿ ನೀರು ಕೊಡುತ್ತಿದ್ದು, ಕೂಡ್ಲು ಕಾಲೋನಿಯಲ್ಲಿ ಕಾವೇರಿ ನೀರು ಸರಬರಾಜು ಇರುವುದಿಲ್ಲ, ಇದರ ಬಗ್ಗೆ ಗಮನಹರಿಸಬೇಕೆಂದು ನೋಡಲ್ ಅಧಿಕಾರಿಗಳು ಬಿ.ಡಬ್ಲ್ಯುಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ತುರ್ತಾಗಿ ಕ್ರಮವಹಿಸಲು ಸೂಚಿಸಿದರು.

3. ಕೂಡ್ಲು ಅಂಬೇಡ್ಕರ್ ಕಾಲೋನಿ ಮತ್ತು ವಾಸ್ತು ಲೇಔಟ್‌ನಲ್ಲಿ ಹೊಸದಾಗಿ ಸ್ಯಾನಿಟರಿ ಲೈನ್ ಅಳವಡಿಸಲು ಸ್ಥಳಿಯರು ಒತ್ತಾಯಿಸಿದರು. ಅದಕ್ಕೆ ಸಂಬಂಧಿಸಿದಂತೆ ತುರ್ತಾಗಿ ಕ್ರಮವಹಿಸಲು ಬಿ.ಡಬ್ಲ್ಯುಎಸ್.ಎಸ್.ಬಿ ಮತ್ತು ಎಲ್ & ಟಿ ಸಹಾಯಕ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ಸೂಚನೆ ನೀಡಿದರು.

4. ಬಿ.ಡಬ್ಲ್ಯುಎಸ್.ಎಸ್.ಬಿಯವರು 110 ಹಳ್ಳಿಗೆ ಸಂಬಂಧಿಸಿದ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಂಡಿರುವ ಪ್ರದೇಶಗಳಲ್ಲೇ ರಸ್ತೆಗಳನ್ನು ತುರ್ತಾಗಿ ಆದಷ್ಟು ಬೇಗ ಒಳಚರಂಡಿ ಕೆಲಸ ಪೂರ್ಣಗೊಳಿಸಿದರೆ ವಾರ್ಡ್‌ನಲ್ಲಿ ಇರುವ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಸಾಧ್ಯವಾಗುತ್ತದೆ. ಎಂದು ಬಿ.ಬಿ.ಎಂ.ಪಿ ಸಹಾಯಕ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

5. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ವ್ಯಾಕ್ಸಿನ್ ಹಾಕುವಾಗ ರಾಜಕೀಯ ವ್ಯಕ್ತಿಗಳು ಭಾಗವಹಿಸಬಾರದೆಂದು ಸಾರ್ವಜನಿಕರಿಗೆ ಅನುಕೂಲವಾಗಲು ಕ್ಯೂನಲ್ಲಿ ಇದ್ದವರಿಗೆ ಎಲ್ಲರಿಗೂ ಟೋಕನ್ ನೀಡಬೇಕೆಂದು ಸ್ಥಳಿಯರಾದ ಶ್ರೀ ಆರ್.ಎಂ.ಎನ್ ರಮೇಶ್ ರವರು ಸಭೆಯಲ್ಲಿ ತಿಳಿಸಿದರು. ಇದರ ಬಗ್ಗೆ ಕ್ರಮವಹಿಸಲು ವಾರ್ಡ್ ಸಮಿತಿ ಸದಸ್ಯರಿಗೆ ನೋಡಲ್ ಅಧಿಕಾರಿಗಳು ಸೂಚನೆ ನೀಡಿದರು.

6. ವಾರ್ಡ್‌ನಲ್ಲಿ ಯಾವ ಯಾವ ಕೆಲಸ ಎಷ್ಟು ಎಷ್ಟು ಅನುದಾನದಲ್ಲಿ ಕಾಮಗಾರಿ ನಡೆಯುತ್ತಿದೆ. ಎಂಬುದರ ವಿವರ ಸಾರ್ವಜನಿಕರಿಗೆ ತಿಳಿಯಲು ಅಲ್ಲಲ್ಲಿ ಬೋರ್ಡ್‌ಗಳನ್ನು ಅಳವಡಿಸಬೇಕೆಂದು ಸ್ಥಳಿಯರಾದ ಶ್ರೀ ಆರ್.ಎಂ.ಎಸ್ ರಮೇಶ್ ರವರು ಸಭೆಯಲ್ಲಿ ಕೋರಿದರು.

7. ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಎಲ್ಲಾ ಅಧಿಕಾರಿಗಳಿಗೆ ಶೋಕಾಷ್ ನೋಟಿಸ್ ನೀಡಲು ವಾರ್ಡ್ ಸಮಿತಿ ಅಧ್ಯಕ್ಷರು ಸಭೆಯಲ್ಲಿ ಬಿ.ಬಿ.ಎಂ.ಪಿ ಸಹಾಯಕ ಅಭಿಯಂತರರಿಗೆ ಸೂಚನೆ ನೀಡಿದರು.

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ನಂ –191 ಸಿಂಗಸಂದ್ರ

ವಾರ್ಡ್ ಕಮಿಟಿ ಅಧ್ಯಕ್ಷರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ನಂ 191, ಸಿಂಗಸಂದ್ರ

ಪ್ರತಿಗಳು:-

1) ಮಾನ್ಯ ಆಡಳಿತಗಾರರು, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
2) ಮಾನ್ಯ ಆಯುಕ್ತರು, ಬೃ.ಬೆಂ.ಮ.ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
3) ಮಾನ್ಯ ಶಾಸಕರು, ಬೊಮ್ಮನಹಳ್ಳಿ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
4) ಮಾನ್ಯ ಶಾಸಕರು, ಬೆಂಗಳೂರು ದಕ್ಷಿಣ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
5) ಮಾನ್ಯ ಶಾಸಕರು, ಆನೇಕಲ್ ವಿಧಾನ ಸಭಾಕ್ಷೇತ್ರರವರ ಅವಗಾಹನೆಗೆ ಸಲ್ಲಿಸಿದೆ
6) ವಲಯ ಆಯುಕ್ತರು, ಬೊಮ್ಮನಹಳ್ಳಿ ವಲಯ, ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ
7) ಜಂಟಿ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ.
8) ಉಪ ಆಯುಕ್ತರು, ಬೊಮ್ಮನಹಳ್ಳಿ ವಲಯರವರ ಅವಗಾಹನೆಗೆ ಮಂಡಿಸಿದೆ
9) ಮುಖ್ಯ ಅಭಿಯಂತರರು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
10ಆರೋಗ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
11) ಅರಣ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯರವರಿಗೆ ಸೂಕ್ತ ಕ್ರಮಕ್ಕಾಗಿ
12) ಡಿ.ಜಿ.ಎಂ. ಗೇಲ್‌ಗ್ಯಾಸ್‌ರವರಿಗೆ ಮುಂದಿನ ಕ್ರಮಕ್ಕಾಗಿ,

13) ಮುಖ್ಯಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರ ಅವಗಾಹನೆಗೆ ಕಳುಹಿಸಿದೆ

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕಾಗಿ

15)ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಎಂ.ಆರ್.ಸಿ.ಎಲ್ ರವರಿಗೆ ಮುಂದಿನ ಕ್ರಮಕ್ಕಾಗಿ

16) ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬೃ.ಬೆಂ.ಮ.ಪಾ. ರವರಿಗೆ ಮುಂದಿನ ಕ್ರಮಕ್ಕಾಗಿ

17) ಪಿ.ಎಸ್.ಐ. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ, ಪರಪ್ಪನಅಗ್ರಹಾರಠಾಣೆ,

18) ಕಂದಾಯ ಅಧಿಕಾರಿ (ಬೇಗೂರು) ವಲಯರವರ ಅವಗಾಹನೆಗೆ ಮಂಡಿಸಿದೆ

19) ವಾರ್ಡ್ ಸಮಿತಿ ಸದಸ್ಯರು ರವರಿಗೆ ಕಳುಹಿಸಲಾಗಿದೆ.

20)ಕಛೇರಿಕಡತಕ್ಕೆ